ತಂತಿ ವಿಳಾಸ: ಯೂನಿರೆಜ್
ದೂರವಾಣಿ ಸಂಖ್ಯೆ: 2419677/2419361
ಫ್ಯಾಕ್ಸ್: 0821-2419363/2419301

e-mail: registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್‌ಭವನ, ಮೈಸೂರು

ದಿನಾಂಕ.02-04-2026

ಸಂಖ್ಯೆ:ಜಿಎಲ್13/08/2024-25

## ಸುತ್ತೋಲೆ

ವಿಷಯ: ದಿನಾಂಕ.01.04.2026ರಿಂದ 15.04.2026ರವರೆಗೆ ನಡೆಯುವ ಮನೆಗಳ ಪಟ್ಟಿ ಮತು ಮನೆ ಗಣತಿಯ ಸ್ವಯಂ ಗಣತಿಯನ್ನು ಯಶಸ್ವಿಗೊಳಿಸಲು ಅರಿವು ಮೂಡಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಅಧೀನ ಕಾರ್ಯದರ್ಶಿ, ಕಂದಾಯ ಇಲಾಖೆ(ವಿಪತ್ತು ನಿರ್ವಹಣೆ ಮತ್ತು ಸೇವೆಗಳು-3) ಇವರ ಪತ್ರದ ಸಂಖ್ಯೆ:ಕಂಇ 289 ಟಿಎನ್‌ಆರ್ 2026, ದಿನಾಂಕ 26.03.2026.

****

ಕೇಂದ್ರ ಗೃಹ ಸಚಿವಾಯಲಯ 2027ರ ಜನಗಣತಿಯನ್ನು ಎರಡು ಹಂತದಲ್ಲಿ ನಡೆಸಲು ಉದ್ದೇಶಿಸಿದ್ದು, ಮೊದಲ ಹಂತವಾಗಿ ದಿನಾಂಕ.01.04.2026ರಿಂದ ದಿನಾಂಕ.15.04.2026ರವರೆಗೆ ಮನೆಗಳ ಪಟ್ಟಿ ಮತ್ತು ಮನೆ ಗಣತಿ (HLO) (Phase-1, Houselisting and Housing Census (HLO)ಯಲ್ಲಿ ಮೊದಲ 15 ದಿನಗಳ ಕಾಲ ವೆಬ್ ಪೋರ್ಟಲ್ ((https://se/census.gov.in) ಮೂಲಕ ಸ್ವಯಂ-ಗಣತಿ (SE) ಗೆ ಅವಕಾಶವಿರುತ್ತದೆ. ಅದರಂತೆ, ಮನೆಯ ಯಾವುದೇ ಒಬ್ಬ ಸದಸ್ಯರು ಸುಮಾರು 15-20 ನಿಮಿಷಗಳ ಅವಧಿಯಲ್ಲಿ ಸ್ವಯಂ-ಗಣತಿ ಮಾಡಿ ಮನೆಯ ವಿವರಗಳನ್ನು ಒದಗಿಸಬಹುದು ಮತ್ತು ಮೊಬೈಲ್/ಇಮೇಲ್‌ನಲ್ಲಿ ಸ್ವಯಂ-ಗಣತಿ ಐಡಿ(SE ID) ಪಡೆಯಬಹುದಾಗಿದೆ. ಗಣತಿದಾರರು ಮನೆಗೆ ಭೇಟಿ ನೀಡಿದಾಗ ದೃಢೀಕರಿಸಲು ಸ್ವಯಂ-ಗಣತಿ ದತ್ತಾಂಶದ ಅಂತಿಮ ಸಲ್ಲಿಕೆಗಾಗಿ SE ID ಅವರೊಂದಿಗೆ ಸಹಕರಿಸಬೇಕಾಗಿರುತ್ತದೆ. ಸದರಿ ಸ್ವಯಂ-ಗಣತಿಯಲ್ಲಿ ಹಾಜರಾಗಿ ಸುಗಮಗೊಳಿಸಲು ಸ್ವಯಂ ಗಣತಿಯ ಹಂತ ಹಂತದ ಪ್ರಕ್ರಿಯೆಯನ್ನು ವಿವರಿಸುವ ಬಳಕೆದಾರರ ಮಾರ್ಗದರ್ಶಿಯನ್ನು ಅನುಬಂಧ II ರಲ್ಲಿ ನೀಡಲಾಗಿರುತ್ತದೆ.

ಆದುದರಿಂದ ದಿನಾಂಕ.01.04.2026ರಿಂದ ದಿನಾಂಕ.15.04.2026ರವರೆಗೆ 15 ದಿನಗಳ ಕಾಲ ನಮ್ಮ ರಾಜ್ಯದಲ್ಲಿ ನಡೆಯಲಿರುವ ಮನೆಗಳ ಪಟ್ಟಿ ಮತ್ತು ಮನೆ ಗಣತಿ (HLO)ಯ ಸ್ವಯಂ ಗಣತಿ (Self-Enumeration) ಯಶಸ್ವಿಗೊಳಿಸಲು ಸಹಕರಿಸಲು ತಿಳಿಸಲಾಗಿದೆ.

2/4/2026
ಕುಲಸಚಿವರು
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು-570 005

**ಪ್ರತಿಗಳು:**

1. ಎಲ್ಲಾ ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರುಗಳು/ನಿರ್ದೇಶಕರು/ಸಂಯೋಜನಾಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
2. ಹಣಕಾಸು ಅಧಿಕಾರಿಗಳು, ಮೈಸೂರು, ವಿಶ್ವವಿದ್ಯಾನಿಲಯ, ಮೈಸೂರು.
3. ಕುಲಸಚಿವರು(ಪರೀಕ್ಷಾಂಗ), ಮೈಸೂರು, ವಿಶ್ವವಿದ್ಯಾನಿಲಯ, ಮೈಸೂರು.
4. ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.

(1-4: ಸದರಿ ಸುತ್ತೋಲೆಯನ್ನು ತಮ್ಮ ವಿಭಾಗದ ಸೂಚನಾ ಫಲಕದಲ್ಲಿ ಪ್ರಕಟಿಸುವುದು.)

5. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿ, ಮೌಲ್ಯ ಭವನ, ಮಾನಸಗಂಗೋತ್ರಿ, ಮೈಸೂರು-ಸಂಯೋಜಿತ ಕಾಲೇಜುಗಳ Whatsapp/E-mail ಗ್ರೂಪ್‌ಗೆ ಮಾಹಿತಿ ನೀಡಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕ್ರಮ ವಹಿಸುವುದು.
6. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
7. ಆಡಳಿತಾಧಿಕಾರಿಗಳು, ಮಾನಸಗಂಗೋತ್ರಿ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
8. ಸಂಯೋಜಕರು, ಐ.ಸಿ.ಡಿ, ಗಣಕ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು-ಸುತ್ತೋಲೆ, ಸರ್ಕಾರದ ಪತ್ರ ಹಾಗೂ ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ ಪ್ರಕಟಿಸುವುದು.
9. ಮಾನ್ಯ ಕುಲಪತಿಯವರ/ಕುಲಸಚಿವರ ಆಪ್ತಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
10. ಕಛೇರಿ ಪ್ರತಿ.

ಕರ್ನಾಟಕ ಸರ್ಕಾರ

ಸಂಖ್ಯೆ:ಕಂಇ 289 ಟಿಎನ್ಆರ್ 2026

ಕರ್ನಾಟಕ ಸರ್ಕಾರ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಡಾ॥ ಬಿ ಆರ್ ಅಂಬೇಡ್ಕರ್ ವೀದಿ
ಬೆಂಗಳೂರು, ದಿನಾಂಕ:26.03.2026

**ಇವರಿಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ)
ಬಹುಮಹಡಿಗಳ ಕಟ್ಟಡ
ಬೆಂಗಳೂರು – 560 001.

**ಇವರಿಗೆ:**

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು, ವಿಧಾನಸೌಧ/ವಿಕಾಸಸೌಧ/ ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಮುಖ್ಯ ಆಯುಕ್ತರು, ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಎನ್ ಆರ್ ಸ್ಕ್ವೇರ್ ಬೆಂಗಳೂರು-560002.
3. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
4. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
5. ರಾಜ್ಯದ ಎಲ್ಲಾ ಮಹಾನಗರ/ನಗರ ಪಾಲಿಕೆಗಳ ಆಯುಕ್ತರುಗಳು.

**ಮಾನ್ಯರೇ,**

**ವಿಷಯ :** Self-Enumeration in Phase - I (HLO) of Census of India 2027

**ಉಲ್ಲೇಖ:**
1. ಕಾರ್ಯದರ್ಶಿ, ಭಾರತ ಗೃಹ ಮಂತ್ರಾಲಯ ಇವರ ಪತ್ರ ಸಂಖ್ಯೆ: 9/9/2026-CD(Cen) ದಿನಾಂಕ: 19.03.2026.
2. ಸರ್ಕಾರದ ಅಧಿಸೂಚನೆ ಸಂಖ್ಯೆ: RD 66 TNR 2026, ದಿನಾಂಕ: 17.02.2026

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರ ಮತ್ತು ಅಡಕದ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ. ಸದರಿ ಪತ್ರದಲ್ಲಿ ಕೇಂದ್ರ ಗೃಹ ಮಂತ್ರಾಲಯವು 2027 ರ ಜನಗಣತಿಯನ್ನು ಎರಡು ಹಂತಗಳಲ್ಲಿ ನಡೆಸಲು ಉದ್ದೇಶಿಸಿದ್ದು, ಮೊದಲ ಹಂತವಾದ ಮನೆಗಳ ಪಟ್ಟಿ ಮತ್ತು ಮನೆ ಗಣತಿ (HLO) (Phase-I, Houselisting and Housing Census (HLO))ಯಲ್ಲಿ ಮೊದಲ 15 ದಿನಗಳ ಕಾಲ ವೆಬ್ ಪೋರ್ಟಲ್ (https://se.census.gov.in) ಮೂಲಕ ಸ್ವಯಂ-ಗಣತಿ (SE)ಗೆ ಅವಕಾಶವಿರುತ್ತದೆ. ಅದರಂತೆ, ಮನೆಯ ಯಾವುದೇ ಒಬ್ಬ ಸದಸ್ಯರು ಸುಮಾರು 15-20 ನಿಮಿಷಗಳ ಅವಧಿಯಲ್ಲಿ ಸ್ವಯಂ-ಗಣತಿ ಮಾಡಿ ಮನೆಯ ವಿವರಗಳನ್ನು ಒದಗಿಸಬಹುದು ಮತ್ತು ಮೊಬೈಲ್/ಇಮೇಲ್‌ನಲ್ಲಿ ಸ್ವಯಂ-ಗಣತಿ ಐಡಿ (SE ID) ಪಡೆಯಬಹುದಾಗಿದೆ. ಗಣತಿದಾರರು ಮನೆಗೆ ಭೇಟಿ ನೀಡಿದಾಗ, ದೃಢೀಕರಿಸಲು ಮತ್ತು

...2

ಸ್ವಯಂ-ಗಣತಿ ದತ್ತಾಂಶದ ಅಂತಿಮ ಸಲ್ಲಿಕೆಗಾಗಿ SE ID ಯನ್ನು ಅವರೊಂದಿಗೆ ಹಂಚಿಕೊಳ್ಳಬೇಕಾಗಿರುತ್ತದೆ. ಸದರಿ ಸ್ವಯಂ-ಗಣತಿ (Self Enumeration) ಯಲ್ಲಿ ಭಾಗವಹಿಸುವಿಕೆಯನ್ನು ಸುಗಮಗೊಳಿಸಲು, ಸ್ವಯಂ-ಗಣತಿಯ ಹಂತ-ಹಂತದ ಪ್ರಕ್ರಿಯೆಯನ್ನು ವಿವರಿಸುವ ಬಳಕೆದಾರ ಮಾರ್ಗದರ್ಶಿಯನ್ನು ಅನುಬಂಧ II ರಲ್ಲಿ ನೀಡಲಾಗಿರುತ್ತದೆ.

ಈ ಕುರಿತು, ಕರ್ನಾಟಕ ರಾಜ್ಯದಲ್ಲಿ 2027 ರ ಜನಗಣತಿಯ ಮೊದಲ ಹಂತವಾದ ಮನೆಗಳ ಪಟ್ಟಿ ಮತ್ತು ಮನೆ ಗಣತಿ (HLO) ಯ ಸ್ವಯಂ-ಗಣತಿ (Self Enumeration) ಯನ್ನು ದಿನಾಂಕ: 01.04.2026 ರಿಂದ 15.04.2026ರ ವರೆಗೆ 15 ದಿನಗಳ ಕಾಲ ನಡೆಸಲು ಉದ್ದೇಶಿಸಿ, ಉಲ್ಲೇಖ (2)ರಲ್ಲಿ ಅಧಿಸೂಚನೆಯನ್ನು ಹೊರಡಿಸಲಾಗಿರುತ್ತದೆ.

ಅದರಂತೆ, 2027 ರ ಭಾರತದ ಜನಗಣತಿಯ ಮೊದಲ ಹಂತವಾದ ಮನೆಗಳ ಪಟ್ಟಿ ಮತ್ತು ಮನೆ ಗಣತಿ (HLO) ಯ ಪ್ರಕ್ರಿಯೆಯನ್ನು ತ್ವರಿತಗೊಳಿಸಲು ಸ್ವಯಂ-ಗಣತಿ (Self Enumeration) ಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಎಲ್ಲರ ಭಾಗವಹಿಸುವಿಕೆಯನ್ನು ಸುಗಮಗೊಳಿಸಲು ಭಾರತ ಸರ್ಕಾರವು ಅಭಿವೃದ್ಧಿ ಪಡಿಸಿರುವ ವೆಬ್ ಪೋರ್ಟಲ್ (https://se.census.gov.in)ನ್ನು ಪ್ರಚುರ ಪಡಿಸಲಾದ ~~ಬಳಕೆದಾರರ ಮಾರ್ಗದರ್ಶಿಯ ಬಗ್ಗೆ~~ ಸರ್ಕಾರದ ಎಲ್ಲಾ ಇಲಾಖೆಗಳು ಮತ್ತು ಸರ್ಕಾರದ ಅಧೀನಕ್ಕೆ ಒಳಪಡುವ ಎಲ್ಲಾ ನಿಗಮ/ಮಂಡಳಿ ಇತ್ಯಾದಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿ/ಸಿಬ್ಬಂದಿಗಳು ಸೇರಿದಂತೆ ಎಲ್ಲಾ ನಾಗರಿಕರು/ಗಣತಿದಾರರಿಗೆ ಅರಿವು ಮೂಡಿಸುವಂತೆ ನಾಗರಿಕರು/ಉದ್ಯೋಗಿಗಳು/ಗಣತಿದಾರರಿಗೆ ಅರಿವು ಮೂಡಿಸಲು ಅಗತ್ಯ ಕ್ರಮ ಕೈಗೊಳ್ಳುವ ಮೂಲಕ ದಿನಾಂಕ: 01.04.2026 ರಿಂದ 15.04.2026ರ ವರೆಗೆ 15 ದಿನಗಳ ಕಾಲ ನಮ್ಮ ರಾಜ್ಯದಲ್ಲಿ ನಡೆಯಲಿರುವ ಮನೆಗಳ ಪಟ್ಟಿ ಮತ್ತು ಮನೆ ಗಣತಿ (HLO)ಯ ಸ್ವಯಂ-ಗಣತಿ (Self Enumeration) ಯನ್ನು ಯಶಸ್ವಿಗೊಳಿಸಲು ಜರೂರಾಗಿ ಕ್ರಮ ಕೈಗೊಳ್ಳುವಂತೆ ತಮ್ಮನ್ನು ಕೋರಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

Digitally signed by
G K NARASIMHAMURTHY
Date: 26-03-2026
16:35:13

(ನರಸಿಂಹಮೂರ್ತಿ ಜಿ.ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ
ಕಂದಾಯ ಇಲಾಖೆ
(ವಿಪತ್ತು ನಿರ್ವಹಣೆ ಮತ್ತು ಸೇವೆಗಳು-3)

**ಪ್ರತಿ ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ:**
ಜನಗಣತಿ ಕಾರ್ಯಾಚರಣೆಗಳ ನಿರ್ದೇಶಕರು ಮತ್ತು ಮುಖ್ಯ ಪ್ರಧಾನ ಜನಗಣತಿ ಅಧಿಕಾರಿ, ಕರ್ನಾಟಕ, ಬೆಂಗಳೂರು-506071.